# Akashvani : Bangalore
# Regional Bulletin In Kannada
# 30.06.2025 / 14.30 hrs

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**30.06.2025 / 14.30 hrs**

**<><*<><>*><>**

<u>ಮುಖ್ಯಾಂಶಗಳು</u>

- ಕೆಆರ್‌ಎಸ್ ಜಲಾಶಯಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಬಾಗಿನ - ರಾಜ್ಯದಲ್ಲಿ ದ್ವಿಭಾಷಾ ಸೂತ್ರಕ್ಕೆ ಸರ್ಕಾರ ಒಪ್ಪಿಗೆ
- ಕಾನೂನು ಮೀರಿ ಮರಳುಗಾರಿಕೆ, ಕೆಂಪು ಕಲ್ಲು ಕ್ವಾರಿ ನಡೆಸಲು ಅವಕಾಶವಿಲ್ಲ - ಸಚಿವ ದಿನೇಶ್ ಗುಂಡೂರಾವ್ ಸ್ಪಷ್ಟನೆ
- ಮೀಣ್ಯಂ ಅರಣ್ಯದಲ್ಲಿ ಹುಲಿಗಳಿಗೆ ವಿಷ ಪ್ರಾಷನ ಪ್ರಕರಣ - ಹೆಚ್ಚಿನ ವಿಚಾರಣೆಗೆ ಆರೋಪಿಗಳು ಅರಣ್ಯ ಅಧಿಕಾರಿಗಳ ವಶಕ್ಕೆ
- ಹುಬ್ಬಳ್ಳಿ ಧಾರವಾಡ ಪಾಲಿಕೆಯ ಮಹಾಪೌರರಾಗಿ ಜ್ಯೋತಿ ಪಾಟೀಲ ಹಾಗೂ ಉಪಮಹಾಪೌರರಾಗಿ ಸಂತೋಷ ಚವ್ಹಾಣ್ ಆಯ್ಕೆ

><><><><><><><><

ರಾಜ್ಯದಲ್ಲಿ ಸುರಿದ ಉತ್ತಮ ಮಳೆಯಿಂದಾಗಿ ಕಳೆದ ವರ್ಷಕ್ಕಿಂತ ಈ ವರ್ಷ ಮುಂಗಾರು ಆರಂಭಕ್ಕೂ ಮೊದಲೇ ಬಹುತೇಕ ಜಲಾಶಯಗಳು ಭರ್ತಿಯಾಗಿವೆ. ಕೆಆರ್ ಎಸ್ ಅಣೆಕಟ್ಟು ಗರಿಷ್ಠ ಸಾಮರ್ಥ್ಯಕ್ಕೆ ಭರ್ತಿಯಾಗಿರುವುದರಿಂದ ಈ ಭಾಗದ ಜೀವನಾಡಿ ನದಿಗೆ ಮುಖ್ಯಮಂತ್ರಿಗಳು ಬಾಗಿನ ಅರ್ಪಿಸುವುದು ವಾಡಿಕೆ. ಇಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಕೆ ಆರ್ ಎಸ್ ಗೆ ಬಾಗಿನ ಅರ್ಪಿಸಿದರು. ಈ ಸಂದರ್ಭದಲ್ಲಿ ಉಪಮುಖ್ಯಮಂತ್ರಿ ಡಿ ಕೆ ಶಿವಕುಮಾರ್ , ಸಚಿವರಾದ ಹೆಚ್ ಸಿ ಮಹದೇವಪ್ಪ, ಚೆಲುವರಾಯಸ್ವಾಮಿ ಉಪಸ್ಥಿತರಿದ್ದರು.

><><><><><><><><

ರಾಜ್ಯದಲ್ಲಿ ದ್ವಿಭಾಷಾ ಸೂತ್ರವನ್ನು ಒಪ್ಪಿಕೊಳ್ಳುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಇಂದು ಕೆಆರ್ ಎಸ್ ಜಲಾಶಯಕ್ಕೆ ಬಾಗಿನ ಅರ್ಪಿಸುವ ಮೊದಲು ಮೈಸೂರಿನ ವಿಮಾನ ನಿಲ್ದಾಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹಾಸನ ಜಿಲ್ಲೆಯಲ್ಲಿ ಇತ್ತೀಚಿನ ದಿನಗಳಲ್ಲಿ ಹೆಚ್ಚಿನ ಯುವ ಸಮೂಹ ಹೃದಯಘಾತದಿಂದ ಸಾವನ್ನಪ್ಪುತ್ತಿರುವ ಕುರಿತಂತೆ ತಜ್ಞ ವೈದ್ಯರಿಂದ ಪರಿಶೀಲನೆ ನಡೆಸಲಾಗುವುದೆಂದು ತಿಳಿಸಿದ್ದಾರೆ.

ಧ್ವನಿ : ಮುಖ್ಯಮಂತ್ರಿ ಸಿದ್ದರಾಮಯ್ಯ ( ಸೆಕೆಂಡುಗಳು)

ರಾಜ್ಯದಿಂದ ತಮಿಳುನಾಡಿಗೆ ನೀರು ಹಂಚಿಕೆ ವಿಚಾರವಾಗಿ ಪ್ರತಿಕ್ರಿಯಿಸಿದ ಅವರು, ೨೦೨೩-೨೪ ರಲ್ಲಿ ನ್ಯಾಯಾಧೀಕರಣದ ಆದೇಶದ ಪ್ರಕಾರ ೧೭೭.೧೫ ಟಿಎಂಸಿ ನೀರು ಬಿಡಲಾಗುತ್ತಿತ್ತು. ಈ ಬಾರಿ ಹೆಚ್ಚುವರಿಯಾಗಿ ೯ ಟಿಎಂಸಿ ನೀರು ಬಿಡಬೇಕಿತ್ತು. ಆದರೆ ೨೨ ಟಿಎಂಸಿ ನೀರು ಬಿಡಲಾಗಿದೆ. ೧೭೭.೫ ಟಿಎಂಸಿ ನೀರು ಕೊಡಲು ರಾಜ್ಯದ ತಕರಾರು ಇಲ್ಲ. ಸಂಕಷ್ಟದ ಸಮಯದಲ್ಲಿ ನೀರು ಹಂಚಿಕೆಯಾಗಬೇಕು ಅದನ್ನು ಸರಿದೂಗಿಸಲು ಮೇಕೆದಾಟು ಯೋಜನೆ ಜಾರಿ ಮಾಡುವ ಮೂಲಕ ಹೆಚ್ಚುವರಿ ನೀರು ಸಂಗ್ರಹಿಸಲು ಮುಂದಾಗಬೇಕಿದೆ ಎಂದು ತಿಳಿಸಿದ್ದಾರೆ. ರಾಜ್ಯ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೆವಾಲ ರಾಜ್ಯಕ್ಕೆ ಭೇಟಿ ನೀಡಿ ಕಾಂಗ್ರೆಸ್ ಶಾಸಕರ ಜೊತೆ ಮಾತುಕತೆ ವಿಚಾರಕ್ಕೆ ಪ್ರತಿಕ್ರಿಯಿಸಿದ ಅವರು, ಅಭಿಪ್ರಾಯಗಳನ್ನು ಸಂಗ್ರಹಿಸುತ್ತಾರೆ, ಸಂಘಟನೆ ದೃಷ್ಟಿಯಿಂದ ಶಾಸಕರ ಬಳಿ ಅಭಿಪ್ರಾಯ ಪಡೆಯಲಿದ್ದು. ಉಸ್ತುವಾರಿಯಾಗಿ ಅವರ ಕೆಲಸವನ್ನು ಅವರು ಮಾಡಲಿದ್ದಾರೆ.

><><><><><><><

ಅಭಾವವಿದೆಯೆಂದು ಮರಳುಗಾರಿಕೆ ಅಥವಾ ಕೆಂಪು ಕಲ್ಲು ಕ್ವಾರಿ ನಡೆಸುವುದಕ್ಕೆ ಕಾನೂನು ಮೀರಿ ಅವಕಾಶವಿಲ್ಲ ಎಂದು ದಕ್ಷಿಣ ಕನ್ನಡ ಜಿಲ್ಲಾ ಉಸ್ತುವಾರಿ ಸಚಿವ ದಿನೇಶ್ ಗುಂಡೂರಾವ್ ಸ್ಪಷ್ಟಪಡಿಸಿದ್ದಾರೆ. ಮಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಮರಳು ಹಾಗೂ ಕೆಂಪು ಕಲ್ಲು ಕೊರತೆಯಿದೆ ಆದರೆ ಕಾನೂನು ಬಾಹಿರವಾಗಿ ಮರಳುಗಾರಿಕೆ, ಕಲ್ಲುಕೋರೆ ನಡೆಸಲು ಅವಕಾಶವಿಲ್ಲ ಎಂದು ತಿಳಿಸಿದ್ದಾರೆ. ಕೇಂದ್ರ ಸರಕಾರ, ಸಿಆರ್‌ಝಡ್ ಹಾಗೂ ಗಣಿಗಾರಿಕೆಯ ಕಾನೂನುಗಳೆಂದು ಬೇರೆ ಬೇರೆ ಕಾನೂನುಗಳಿವೆ. ಆದ್ದರಿಂದ ಈಗಿರುವ ಕಾನೂನುಗಳಲ್ಲಿ ಬದಲಾವಣೆ ಮಾಡಲು ಅಥವಾ ಸಡಿಲಗೊಳಿಸಲು ಅವಕಾಶವಿದೆಯೇ ಎಂಬ ಬಗ್ಗೆ ಚರ್ಚಿಸುವುದಾಗಿ ಸಚಿವರು ತಿಳಿಸಿದ್ದಾರೆ.

><><><><><><><

ಚಾಮರಾಜನಗರ ಜಿಲ್ಲೆಯ ಹನೂರು ತಾಲ್ಲೂಕಿನ ಮೀಣ್ಯಂ ಅರಣ್ಯದಲ್ಲಿ ಐದು ಹುಲಿಗಳ ಸಾವಿಗೆ ಕಾರಣರಾದ ಮೂವರು ಆರೋಪಿಗಳನ್ನು ಹನೂರಿನಲ್ಲಿರುವ ನ್ಯಾಯಾಲಯಕ್ಕೆ ಅರಣ್ಯಾಧಿಕಾರಿಗಳು ಹಾಜರು ಪಡಿಸಿದರು. ಹನೂರಿನ ಸಹಾಯಕ ಅರಣ್ಯಾಧಿಕಾರಿಗಳಾದ ಗಜಾನನ ಹೆಗಡೆ ಉಮಾಪತಿ ಮತ್ತು ಆರ್ ಎಫ್ ಓ ಮಾದೇಶ್ ಅರಣ್ಯ ಸಿಬ್ಬಂದಿ ಬೆಂಗಾವಲಲ್ಲಿ ಹುಲಿ ಸಾವಿನ ಪ್ರಕರಣದ ಆರೋಪಿಗಳಾದ ಮಾದುರಾಜು, ನಾಗರಾಜು ಮತ್ತು ಕೋನಪ್ಪ ಅವರನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿದರು. ಆರೋಪಿಗಳನ್ನು ಹೆಚ್ಚಿನ ವಿಚಾರಣೆಗೆ ತಮ್ಮ ವಶಕ್ಕೆ ನೀಡುವಂತೆ ಅರಣ್ಯಾಧಿಕಾರಿಗಳು ಮನವಿ ಮಾಡಿದ ಹಿನ್ನೆಲೆಯಲ್ಲಿ ನ್ಯಾಯಾಧೀಶರಾದ ಕಾವ್ಯಶ್ರೀ ಅರಣ್ಯಾಧಿಕಾರಿಗಳ ವಶಕ್ಕೆ ನೀಡಿದರು. ಬಳಿಕ ವಿಚಾರಣೆಯನ್ನು ಜುಲೈ ೩ಕ್ಕೆ ಮುಂದೂಡಿದರು.

><><><><><><><

ಹುಬ್ಬಳ್ಳಿ ಧಾರವಾಡ ಮಹಾನಗರ ಪಾಲಿಕೆಯ ೨೪ನೇ ಅವಧಿಗೆ ಮಹಾಪೌರರಾಗಿ ಜ್ಯೋತಿ ಪಾಟೀಲ ಹಾಗೂ ಸಂತೋಷ ಚವ್ಹಾಣ ಉಪ ಮಹಾಪೌರರಾಗಿ ಆಯ್ಕೆ ಆಗಿದ್ದಾರೆ. ಆಯುಕ್ತರಾದ ಎಸ್.ಬಿ.ಶೆಟ್ಟೆಣ್ಣವರ ಫಲಿತಾಂಶ ಪ್ರಕಟಿಸಿದ್ದಾರೆ. ಮಹಾಪೌರ ಸ್ಥಾನಕ್ಕೆ ಮಹಾನಗರ ಪಾಲಿಕೆಯ

೫೯ನೇ ವಾರ್ಡ್ ಸದಸ್ಯರಾದ ಸುವರ್ಣ ಕಲಕುಂಟ್ಲ ಹಾಗೂ ೭೬ ನೇ ವಾರ್ಡ ಸದಸ್ಯರಾದ ವಹೀದಾ ಖಾನಂ ಅಲ್ಲಾಭಕ್ಷ ಕಿತ್ತೂರು ಸ್ಪರ್ಧಿಸಿದ್ದರು. ಹುಬ್ಬಳ್ಳಿ ಧಾರವಾಡ ಮಹಾನಗರ ಪಾಲಿಕೆಯ ಮಹಾಪೌರ ಮತ್ತು ಉಪಮಹಾಪೌರ ಚುನಾವಣೆಗೆ ಪಾಲಿಕೆ ಸದಸ್ಯರು, ಲೋಕಸಭಾ ಸದಸ್ಯರು, ಶಾಸಕರು ಮತ್ತು ವಿಧಾನ ಪರಿಷತ್ತು ಸದಸ್ಯರು ಸೇರಿ ಒಟ್ಟು ೯೦ ಜನ ಮತದಾರರು ಇದ್ದು, ಇಂದಿನ ಮಹಾಪೌರ ಮತ್ತು ಉಪಮಹಾಪೌರ ಚುನಾವಣೆಯಲ್ಲಿ ೮೭ ಮಂದಿ ಪಾಲ್ಗೊಂಡಿದ್ದರು.

><><><><><><><

ರಾಜ್ಯ ಸರಕಾರ ಬೆಂಗಳೂರು ನಗರ ಜಿಲ್ಲೆಯ ಮಹದೇವಪುರ ಕ್ಷೇತ್ರದ ಬಿದರಹಳ್ಳಿ ಹೋಬಳಿಯ ಕಾಡುಗೋಡಿಯ ದಿನ್ನೂರು ಗ್ರಾಮದಲ್ಲಿ ಪರಿಶಿಷ್ಟರು ವ್ಯವಸಾಯ ಮಾಡುತ್ತಿರುವ ಬೆಲೆಬಾಳುವ ಜಮೀನನ್ನು ಅರಣ್ಯ ಇಲಾಖೆಯು ವಶಕ್ಕೆ ಪಡೆಯಲು ಮುಂದಾಗುವ ಮೂಲಕ ದೌರ್ಜನ್ಯ ನಡೆಸುತ್ತಿದೆ ಎಂದು ವಿಧಾನಪರಿಷತ್ ವಿರೋಧಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಆರೋಪಿಸಿದ್ದಾರೆ. ಇಂದು ವಿಧಾನಸೌಧದ ಗಾಂಧಿ ಪ್ರತಿಮೆ ಬಳಿ ಹಮ್ಮಿಕೊಂಡಿದ್ದ ಪ್ರತಿಭಟನೆಯ ಸಂದರ್ಭದಲ್ಲಿ ಮಾತನಾಡಿದ ಅವರು ಪರಿಶಿಷ್ಟರ ವಿರುದ್ಧ ನಡೆಯುತ್ತಿರುವ ಕಾರ್ಯಾಚರಣೆಯನ್ನು ಮುಖ್ಯಮಂತ್ರಿಗಳು ತಕ್ಷಣ ನಿಲ್ಲಿಸಬೇಕು.  ದಿನ್ನೂರಿನಲ್ಲಿ ಇದ್ದ ೭೧೧ ಎಕರೆ ಜಾಗದಲ್ಲಿ ರೈಲ್ವೆ ಇಲಾಖೆಗೆ ೨೭೮ ಎಕರೆ, ದೇವಸ್ಥಾನಕ್ಕೆ ಸುಮಾರು ೩ ಎಕರೆ, ರಸ್ತೆಗೆ ೧೩ ಎಕರೆ, ಇಂದಿರಾ ಕ್ಯಾಂಟೀನ್‌ಗೆ ೧೩ ಗುಂಟೆ, ದಿನ್ನೂರು ಕಾಲೊನಿಯಲ್ಲಿ ಮನೆ ಕಟ್ಟಲು ೨೦ ಎಕರೆ ಜಮೀನು ಕೊಡಲಾಗಿದ್ದು, ಸ್ಮಶಾನಕ್ಕೆ ಎರಡೂವರೆ ಎಕರೆ, ಬಡಾವಣೆ ಮಾಡಲು ೩೨ ಎಕರೆ ಹಾಗೂ ಪೊಲೀಸ್ ಠಾಣೆಗೂ ನಾಲ್ಕೂವರೆ ಎಕರೆ ನೀಡಲಾಗಿದೆ. ೧೨೫ ಎಕರೆಯಲ್ಲಿ ಕೃಷಿ ಕಾರ್ಯ ನಡೆದಿದೆ. ಇದರಲ್ಲಿ ಮೆಟ್ರೊಗೆ ೪೫ ಎಕರೆ ಕೊಡಲಾಗಿದೆ ಎಂದು ಆರೋಪಿಸಿದ್ದಾರೆ. ಪ್ರತಿಭಟನೆಯಲ್ಲಿ ವಿಧಾನಪರಿಷತ್ ವಿರೋಧ ಪಕ್ಷ ಮುಖ್ಯ ಸಚೇತಕ ಎನ್. ರವಿಕುಮಾರ್, ವಿಧಾನಪರಿಷತ್ ಸದಸ್ಯ ಕೇಶವ್ ಪ್ರಸಾದ್, ಶಾಸಕ ಸಿಮೆಂಟ್ ಮಂಜುನಾಥ್ ಹಾಗೂ ಇನ್ನಿತರರು ಉಪಸ್ಥಿತರಿದ್ದರು.

><><><><><><><

ಹೊರನಾಡಿನಲ್ಲಿ ನೆಲೆಸಿ ತಾಯ್ನಾಡಿಗೆ ಅನನ್ಯ ಕೊಡುಗೆ ನೀಡುತ್ತಿರುವ ಚೈತನ್ಯಶೀಲ ಕನ್ನಡಿಗರ ಸಾಧನೆ ಅತ್ಯಂತ ಶ್ಲಾಘನೀಯ. ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ಭಾರತವು ಜಗತ್ತಿನ ೪ನೇ ದೈತ್ಯ ಆರ್ಥಿಕ ಶಕ್ತಿಯಾಗಿ ಹೊರಹೊಮ್ಮಿದ್ದು, ಇದೀಗ ೩ನೇ ಸ್ಥಾನದತ್ತ ಭಾರತ ನಾಗಾಲೋಟದಲ್ಲಿದೆ. ಈ ಹಿನ್ನೆಲೆಯಲ್ಲಿ ಬಲಿಷ್ಠ, ಸಮೃದ್ಧ ಭಾರತ ನಿರ್ಮಾಣಕ್ಕೆ ಕನ್ನಡಿಗರ ಕೊಡುಗೆ ಸಂತಸ ಉಂಟು ಮಾಡಿದೆ ಎಂದು ಕೇಂದ್ರ ಸಚಿವ ಎಚ್. ಡಿ. ಕುಮಾರಸ್ವಾಮಿ ಹೇಳಿದ್ದಾರೆ. ಉಕ್ಕು ಸಚಿವಾಲಯದ ಕಾರ್ಯಕ್ರಮದ ನಿಮಿತ್ತ ದುಬೈ ಪ್ರವಾಸದಲ್ಲಿರುವ ಅವರು ಅಲ್ಲಿನ ಅನಿವಾಸಿ ಕನ್ನಡಿಗರನ್ನು ಭೇಟಿ ಮಾಡಿ ಮಾತುಕತೆ ನಡೆಸಿದರು.

><><><><><><><

ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಅವರ ಪ್ರಸ್ತಾವನೆ ಮೇರೆಗೆ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಹುಬ್ಬಳ್ಳಿಯ ರಾಜ್ಯ ಸಮಾಚಾರ ಕೇಂದ್ರಕ್ಕೆ ಟಾಟಾ ಮಾಣಿಕಭಾಗ್ ಆಟೋಮೊಬೈಲ್ಸ್

ಪ್ರೈವೇಟ್ ಲಿಮಿಟೆಡ್ ವತಿಯಿಂದ ಸಿ.ಎಸ್.ಆರ್. ಅನುದಾನದಲ್ಲಿ ಕೊಡ ಮಾಡಲಾಗಿರುವ ೩೨ ಆಸನಗಳ ಪತ್ರಕರ್ತರ ವಾಹನವನ್ನು ಇಂದು ಚಿಟಗುಪ್ಪಿ ಆಸ್ಪತ್ರೆಯ ಆವರಣದಲ್ಲಿರುವ ಸಂಸದರ ಜನಸಂಪರ್ಕ ಕಾರ್ಯಾಲಯದಲ್ಲಿ ವಾರ್ತಾ ಇಲಾಖೆಗೆ ಹಸ್ತಾಂತರಿಸಲಾಯಿತು. ಈ ಸಂದರ್ಭದಲ್ಲಿ ಮಾತನಾಡಿದ ಸಚಿವರು, ಹುಬ್ಬಳ್ಳಿಯ ವಾರ್ತಾ ಇಲಾಖೆಗೆ ಪತ್ರಕರ್ತರ ವಾಹನ ಬಹುದಿನಗಳ ಬೇಡಿಕೆಯಾಗಿದ್ದು, ಟಾಟಾ ಮೋಟರ್ಸ್ ಕಂಪನಿ ನೀಡಿದ ವಾಹನವನ್ನು ವಾರ್ತಾ ಇಲಾಖೆಗೆ ಹಸ್ತಾಂತರ ಮಾಡಲಾಗಿದೆ ಎಂದು ಅವರು ತಿಳಿಸಿದರು.

><><><><><><><><

ಗದಗ ಜಿಲ್ಲೆಯ ಕಪ್ಪತ್ತಗುಡ್ಡ ವನ್ಯಜೀವಿ ಧಾಮದಲ್ಲಿ ಬೀಜದ ಉಂಡೆಗಳ ಎಸೆಯುವ-ಬೀಜ ಬಿತ್ತೋತ್ಸವ ಕಾರ್ಯಕ್ರಮ ಅಭಿಯಾನದ ರೂಪದಲ್ಲಿ ನಡೆಯುತ್ತಿದೆ. ಹೀಗೆ ಎಸೆದ ಬೀಜದ ಉಂಡೆಗಳಿಂದ ಹೊಸ ಸಸ್ಯಗಳು ಕಪ್ಪತ್ತಗುಡ್ಡದ ಪರಿಸರದಲ್ಲಿ ಬೆಳೆದು ಕಪ್ಪತ್ತಗುಡ್ಡದ ಇನ್ನಷ್ಟು ಹಸಿರಿನಿಂದ ಕಂಗೊಳಿಸಲಿ ಎಂಬುದು ಬೀಜದ ಉಂಡೆಗಳ ಎಸೆಯುವ ಉದ್ದೇಶವಾಗಿದೆ ಎಂದು ಮುಂಡರಗಿ ಆರ್ ಎಫ್ ಓ ಮಂಜುನಾಥ ಮೇಗಳಮನಿ ತಿಳಿಸಿದ್ದಾರೆ. ಕೇಂದ್ರ ಸರ್ಕಾರದ ಅರಣ್ಯ ಮತ್ತು ಪರಿಸರ ಹಾಗೂ ಹವಾಮಾನ ಬದಲಾವಣೆ ಇಲಾಖೆಯು ಕಪ್ಪತ್ತಗುಡ್ಡದ ೩೨೨ ಚದರ ಕೀಲೋ ಮೀಟರ್ ವ್ಯಾಪ್ತಿಯನ್ನು ಪರಿಸರ ಸೂಕ್ಷ್ಮ ವಲಯವೆಂದು ಇತ್ತೀಚೆಗೆ ಆದೇಶ ಹೊರಡಿಸಿತ್ತು. ಗದಗ ಜಿಲ್ಲೆಯಲ್ಲಿ ಪ್ರಸಕ್ತ ಸಾಲಿನ ಮುಂಗಾರು ಮಳೆ ಆಶಾದಾಯಕವಾಗಿ ಪ್ರಾರಂಭವಾದ ಹಿನ್ನಲೆಯಲ್ಲಿ ಗದಗ ಜಿಲ್ಲೆಯ ಅರಣ್ಯ ಇಲಾಖೆ ವತಿಯಿಂದ ಕಪ್ಪತ್ತಗುಡ್ಡದ ಪ್ರದೇಶದಲ್ಲಿ ಬೀಜದ ಉಂಡೆಗಳ ಎಸೆಯುವ ಕಾರ್ಯಕ್ರಮ ರೂಪಿಸಿದೆ.

><><><><><><><><

ವೃಕ್ಷಮಾತೆ, ನಾಡೋಜ ಪದ್ಮಶ್ರೀ, ಸಾಲುಮರದ ತಿಮ್ಮಕ್ಕ ಅವರ ಜನ್ಮ ದಿನವಾದ ಇಂದು, ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಶುಭಾಶಯಗಳನ್ನು ಕೋರಿದ್ದಾರೆ. ಕೈಗಾರಿಕೆ ಖಾತೆ ಸಚಿವ ಎಂ.ಬಿ ಪಾಟೀಲ, ತಮ್ಮ ಎಕ್ಸ್ ಖಾತೆ ಮೂಲಕ ತಿಮ್ಮಕ್ಕ ಅವರಿಗೆ ಜನ್ಮ ದಿನದ ಶುಭಾಶಯಗಳನ್ನು ತಿಳಿಸಿದ್ದಾರೆ.

><><><><><><><><